**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್. ಎಫ್. ಸಿ ನ್ಯಾಯಾಧೀಶರ ನ್ಯಾಯಾಲಯ ಯಾದಗಿರಿ.**

**ಸಿಸಿ ನಂ. 426/2020**

| | | |
|---|---|---|
| ಸಾಕ್ಷಿಯ ಹೆಸರುಃ | ನಾಗಪ್ಪ | ಪ್ರಾಸಾಃ 1 |
| ತಂದೆ/ಗಂಡನ ಹೆಸರುಃ | ಹಣಮಂತ | ಚಾಸಾಃ 3 |
| ವಯಸ್ಸು ಃ | 35 ವರ್ಷ | ದಿಃ 04-08-2023 |
| ಉದ್ಯೋಗಃ | ಕೂಲಿ ಕೆಲಸ | ಸಾಕ್ಷಿದಾರರಿಗೆ ಪ್ರಮಾಣ ವಚನ ಭೋದಿಸಲಾಯಿತು. |
| ವಾಸ ಸ್ಥಳಃ | ಮಾದ್ವಾರ ಗ್ರಾಮ. | |

**ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ನನಗೆ ಚಾಸಾಃ 2 ರವರ ಪರಿಚಯ ಇಲ್ಲ. ಚಾಸಾಃ 2 ರವರ ಮರಣಹೊಂದಿರುತ್ತಾರೆ. ನನಗೆ ಆರೋಪಿತರ ಪರಿಚಯ ಇದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ನುಡಿದಿರುವುದಿಲ್ಲ. ಯಾವ ದಿನದಂದು ಏನು ಆಗಿದೆ ಎಂದು ಗೊತ್ತಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನಮ್ನ ತೋರಿಸಲಾಗಿ ಅದು ಜಪ್ತಿ ಪಂಚನಾಮೆಯಾಗಿದ್ದು ಅದನ್ನು ಸಾಕ್ಷಿಯು ನೋಡಿ ಗುರುತಿಸಿರುವುದರಿಂದ ಅದನ್ನು ನಿಪಿ-1 ಎಂದು, ಸಾಕ್ಷಿಯ ಸಹಿ ನಿಪಿ-1(ಎ) ಎಂದು ಗುರುತಿಸಿರುತ್ತಾನೆ. ನಿಪಿ-1 ರಲ್ಲಿ ಏನು ಬರೆದಿರುತ್ತಾರೆ ಎಂಬುದರ ಬಗ್ಗೆ ಮಾಹಿತಿ ನನಗೆ ಇಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸರಕಾರಿ ಸಹಾಯಕ ಅಭೀಯೋಜಕರವರು ಪಾಟಿ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು ನ್ಯಾಯಾಲಯದ ಮುಂದೆ ಇರುವ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)**

ದಿನಾಂಕ 01.02.2020 ರಂದು ನನಗೆ ಮತ್ತು ಚಾಸಾಃ 2 ರವರನ್ನು ಪೋಲಿಸರು ಜಪ್ತಿ ಪಂಚನಾಮೆ ಸಾಕ್ಷಿದಾರಾಗಿ ಕರೆಸಿರತ್ತಾರೆ ಎಂದರೆ ಸರಿಯಲ್ಲ. ನಮ್ಮ ಸಮಕ್ಷಮದಲ್ಲಿ ನಿಪಿ-1 ರಲ್ಲಿ ಬರೆದಿರುವ ಮುದ್ದೆ ಮಾಲುಗಳನ್ನು ಜಪ್ತಿ ಪಡಿಸಿಕೊಂಡಿರುತ್ತಾರೆ ಅಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟಿ ಸವಾಲುಃ  ಆರೋಪಿ ಪರ ವಕೀಲರು ಶ್ರೀ ಆರ್.ಎಸ್.ಪಿ  ಇವರಿಂದ ಇಲ್ಲ</u>**

**ಮರು ವಿಚಾರಣೆಃ  ಇಲ್ಲ**

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ**
**ನ್ಯಾಯಾಧೀಶರು ಯಾದಗಿರಿ**